ಫ್ಯಾಕ್ಸ್ : 080 – 2202 8041 ದೂರವಾಣಿ : 080 – 2202 8032

ಕರ್ನಾಟಕ ಸರ್ಕಾರ

ವಾರ್ತಾ ಇಲಾಖೆ

ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಇ : ಉ ನಿ : ಸುಮಪ : 2014-15: ಜೂನ್ 30, 2014

ಪತ್ರಿಕಾ ಪ್ರಕಟಣೆ

# ಪಿ.ಎಸ್.ಎಲ್.ವಿ. -23 ಯಶಸ್ವೀ ಉಡಾವಣೆಗೆ ಮುಖ್ಯಮಂತ್ರಿ ಹರ್ಷ

ಬೆಂಗಳೂರು, ಜೂನ್ 30 (ಕರ್ನಾಟಕ ವಾರ್ತೆ)

ಐದು ವಿದೇಶಿ ಉಪಗ್ರಹಗಳನ್ನು ಕಕ್ಷೆಗೆ ಸೇರಿಸಿದ ಭಾರತದ ಪಿ.ಎಸ್.ಎಲ್.ವಿ. - 23 ಯಶಸ್ವೀ ಉಡಾವಣೆಯ ಬಗ್ಗೆ ಮುಖ್ಯಮಂತ್ರಿ ಶ್ರೀ ಸಿದ್ದರಾಮಯ್ಯ ಅವರು ಹರ್ಷ ವ್ಯಕ್ತಪಡಿಸಿದ್ದಾರೆ.

ಭಾರತೀಯ ಬಾಹ್ಯಾಕಾಶ ಸಂಸ್ಥೆ ನಿರ್ಮಿಸಿದ ಪಿ.ಎಸ್.ಎಲ್.ವಿ. 23 ವಿದೇಶಿ ಐದು ಉಪಗ್ರಹಗಳನ್ನು ನಭೋ ಮಂಡಲಕ್ಕೆ ಸೇರಿಸಿದ್ದು ನಮ್ಮ ಭಾರತೀಯ ವಿಜ್ಞಾನಿಗಳ ಸಾಧನೆಯಾಗಿದೆ. ನಮ್ಮ ಭಾರತೀಯ ವಿಜ್ಞಾನ ಹಾಗೂ ವಿಜ್ಞಾನಿಗಳು ವಿಶ್ವ ದಾಖಲೆ ಸ್ಥಾಪಿಸಿದ್ದಾರೆ ಎಂಬುದಕ್ಕೆ ಇದು ಉತ್ತಮ ಉದಾಹರಣೆಯಾಗಿದೆ ಎಂದು ಶ್ರೀ ಸಿದ್ದರಾಮಯ್ಯ ಅವರು ತಮ್ಮ ಸಂದೇಶದಲ್ಲಿ ತಿಳಿಸಿದ್ದಾರೆ.